10/16/26, 5:19 PM Talk - Kolar.jpeg

# ‘ಸಮ ಸಮಾಜ ನಿರ್ಮಾಣಕ್ಕೆ ಎಲ್ಲರೂ ಶ್ರಮಿಸಿ’

## ಕೋಲಾರದ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಹಿಳಾ ಹಕ್ಕುಗಳ ಅರಿವು ಕಾರ್ಯಕ್ರಮ

■ **ಉದಯವಾಣಿ ಸಮಾಚಾರ**

**ಕೋಲಾರ:** ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಲಾವೇದಿಕೆ ವತಿಯಿಂದ, ಪಿಎಂ ಉಷಾ ಯೋಜನೆಯಡಿ ಹಾಗೂ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸಹಯೋಗದಲ್ಲಿ 'ಮಹಿಳಾ ಹಕ್ಕುಗಳು ಮತ್ತು ನ್ಯಾಯದ ಕುರಿತಾದ ಅರಿವು ಮೂಡಿಸುವ ಕಾರ್ಯಕ್ರಮ' ಕುರಿತು ಒಂದು ದಿನದ ಕಾರ್ಯಾಗಾರ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡು ಮಾತನಾಡಿದ ವಕೀಲರು ಹಾಗೂ ರಾಜ್ಯ ಬಾಲ ನ್ಯಾಯ ಮಂಡಳಿ ಸದಸ್ಯೆ ಸರಸ್ವತಮ್ಮ ಡಿ.ಕೆ., ವಿದ್ಯಾರ್ಥಿಗಳಿಗೆ ಮಹಿಳಾ ಹಕ್ಕುಗಳು ಮತ್ತು ಕಾನೂನು ನ್ಯಾಯದ ಕುರಿತು ವಿಸ್ತೃತ ಮಾಹಿತಿ ನೀಡಿದರು.

ಬೆಂಗಳೂರಿನ ಸೆಂಟ್ ಜೋಸೆಫ್ ಕಾಲೇಜಿನ ಸಮಾಜಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕಿ ಡಾ. ಮೇರಿಯ ಮಾತನಾಡಿ, ಲಿಂಗ ತಾರತಮ್ಯ ನಿವಾರಣೆ ಹಾಗೂ ಸಾಮಾಜಿಕ ಸಮಾನತೆಯನ್ನು ಕಾಪಾಡುವಲ್ಲಿ ವಿದ್ಯಾರ್ಥಿಗಳ ಪಾತ್ರ ಮಹತ್ವದ್ದು ಎಂದರು. ಕಾಲೇಜಿನ ಮನಃಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಅಕ್ಷರ, ಇಂದಿನ ಯುವಜನತೆಯ ಮನಸ್ಥಿತಿ ಮತ್ತು ಬೆಳೆಸಿಕೊಳ್ಳಬೇಕಾದ ನೈತಿಕ ಹಾಗೂ ಸಾಮಾಜಿಕ ಮೌಲ್ಯಗಳ ಕುರಿತು ಉಪನ್ಯಾಸ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಎ. ಮುನಿಶಾಮಪ್ಪ ಮಾತನಾಡಿದರು. ವೇದಿಕೆಯಲ್ಲಿ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಪಿಎಂ ಉಷಾ ನೋಡಲ್ ಅಧಿಕಾರಿ ಡಾ. ರಮೇಶ್ ಎನ್., ಯೋಜನಾ ಪ್ರತಿನಿಧಿಗಳಾದ ಮೋನಿತ್ ಗೌಡ ಹಾಗೂ ಬಾಲಾಜಿ ಕೆ. ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರಾದ ಡಾ. ರತ್ನಪ್ರಭಾ, ಡಾ. ಶಿವಪ್ಪ ಡಾ. ರೇಣುಕಾ ಜಾಂಬವ್, ಡಾ. ಇಂದಿರಮ್ಮ, ಡಾ. ಮುನಿರಾಜು, ಡಾ. ಪ್ರಸನ್ನಕುಮಾರಿ, ಡಾ. ಜ್ಯೋತಿ, ಡಾ. ರಾಯಪ್ಪ ಡಾ. ನಂದೀಶ, ಕೌಸಲ್ಯ, ಶೇಖರ್, ಬೋಧಕೇತರ ಸಿಬ್ಬಂದಿ ಹಾಗೂ ಕಲಾ ವಿಭಾಗದ ವಿದ್ಯಾರ್ಥಿಗಳು ಭಾಗವಹಿಸಿದ್ದರು.




**ಮಹಿಳಾ ಹಕ್ಕುಗಳು ಮತ್ತು ನ್ಯಾಯದ ಕುರಿತಾದ ಅರಿವು ಮೂಡಿಸುವ ಕಾರ್ಯಕ್ರಮ’ ಕುರಿತು 1 ದಿನದ ಕಾರ್ಯಾಗಾರ ಯಶಸ್ವಿಯಾಗಿ ನಡೆಯಿತು.**

https://mail.google.com/mail/u/0/?tab=rm&ogbl#inbox/FMfcgzQhWxQlFtXkbSrqNZBCtzMxrGbb?projector=1&messagePartId=0.1 1/1